# Akashvani : Bangalore
# National Bulletin In Kannada

**13.08.2024** **19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><*<><>*><>

## ಮುಖ್ಯಾಂಶಗಳು

<><*<><>*><>

೧. ಕೆಂಪುಕೋಟೆಯಲ್ಲಿ ನಡೆಯುವ ಸ್ವಾತಂತ್ರ್ಯೋತ್ಸವ ಸಮಾರಂಭಕ್ಕೆ ಪಂಚಾಯತ್ ರಾಜ್‌ನ ೪೦೦ ಚುನಾಯಿತ ಪ್ರತಿನಿಧಿಗಳಿಗೆ ವಿಶೇಷ ಆಹ್ವಾನ

೨. ಕೋಲ್ಕತ್ತಾ ಲೈಂಗಿಕ ದೌರ್ಜನ್ಯ ಪ್ರಕರಣ; ಸಿಬಿಐ ತನಿಖೆಗೆ ಹೈಕೋರ್ಟ್ ಆದೇಶ

೩. ವಕ್ಫ್ ತಿದ್ದುಪಡಿ ವಿಧೇಯಕ-೨೦೨೪ ರ ಜಂಟಿ ಸಮಿತಿ ಅಧ್ಯಕ್ಷರಾಗಿ ಬಿಜೆಪಿ ಸಂಸದ ಜಗದಾಂಬಿಕಾ ಪಾಲ್ ನೇಮಕ

೪. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದ ಭಾರತ ಹಾಕಿ ತಂಡಕ್ಕೆ ದೆಹಲಿಯಲ್ಲಿಂದು ಭವ್ಯ ಸ್ವಾಗತ

<><*<><>*><>

ದೆಹಲಿಯ ಕೆಂಪುಕೋಟೆಯಲ್ಲಿ ಆಚರಿಸಲಿರುವ ಈ ಬಾರಿಯ ೭೮ನೇ ಸ್ವಾತಂತ್ರ್ಯ ದಿನಾಚರಣೆಗೆ ವಿಶೇಷ ಅತಿಥಿಗಳಾಗಿ ಪಂಚಾಯತ್ ರಾಜ್ ಸಂಸ್ಥೆಗಳ ಮಹಿಳಾ ಪ್ರತಿನಿಧಿಗಳು ಸೇರಿದಂತೆ ೪೦೦ ಚುನಾಯಿತ ಪ್ರತಿನಿಧಿಗಳನ್ನು ಕೇಂದ್ರ ಸರ್ಕಾರ ಆಹ್ವಾನಿಸಿದೆ. ಏತನ್ಮಧ್ಯೆ, ಪಂಚಾಯತ್ ರಾಜ್ ಸಚಿವಾಲಯ, ನಾಳೆ ನವದೆಹಲಿಯಲ್ಲಿ ಪಂಚಾಯತ್‌ಗಳಲ್ಲಿ ಮಹಿಳಾ ನಾಯಕತ್ವದ ಕುರಿತು ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ. ಈ ಕಾರ್ಯಾಗಾರವು, ಮಹಿಳಾ ನಾಯಕಿಯರ ಸವಾಲುಗಳು, ಅವಕಾಶಗಳ ಅನ್ವೇಷಣೆ, ಯಶಸ್ಸಿನ ಕಥೆಗಳನ್ನು ಪ್ರದರ್ಶಿಸುವುದು ಮತ್ತು ಸ್ಥಳೀಯ ಆಡಳಿತದಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಕಾರ್ಯತಂತ್ರಗಳನ್ನು ಚರ್ಚಿಸಲಾಗುತ್ತದೆ. ಎಲ್ಲಾ ಆಹ್ವಾನಿತ ಪಂಚಾಯತ್ ರಾಜ್ ಪ್ರತಿನಿಧಿಗಳು ಈ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದು, ಕೇಂದ್ರ ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ಮತ್ತು ಪಂಚಾಯತ್ ರಾಜ್ ರಾಜ್ಯ ಸಚಿವ ಪ್ರೊಫೆಸರ್ ಎಸ್.ಪಿ.ಸಿಂಗ್ ಬಾಘೇಲ್ ಅವರು ನಾಳೆ ಆಹ್ವಾನಿತರನ್ನು ಸನ್ಮಾನಿಸಲಿದ್ದಾರೆ. ಸಮಾರಂಭದಲ್ಲಿ,

ಭಾಷಿಣಿ ಸಹಯೋಗದಲ್ಲಿ ಬಹುಭಾಷಾ ಜಉಡಿಚಿಟಖತಿಚಿಡಿಚಿರಿ ವೇದಿಕೆಯನ್ನು ಪ್ರಾರಂಭಿಸಲಾಗುವುದು. ಈ ಉಪಕ್ರಮ ಎಲ್ಲಾ ಇಪ್ಪತ್ತೆರಡು ನಿಗದಿತ ಭಾರತೀಯ ಭಾಷೆಗಳಲ್ಲಿ ಪೋರ್ಟಲ್‌ಗೆ ಪ್ರವೇಶಿಸಲು ಅನುವು ಮಾಡಿಕೊಡಲಿದೆ.

**<><*<><>*><>**

ಕೋಲ್ಕತ್ತಾದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಕರ್ತವ್ಯನಿರತ ವೈದ್ಯೆಯ ಮೇಲೆ ನಡೆದ ಲೈಂಗಿಕ ದೌರ್ಜನ್ಯ ಮತ್ತು ಕೊಲೆ ಪ್ರಕರಣದ ಕುರಿತಂತೆ ಕೊಲ್ಕತ್ತಾ ಉಚ್ಚ ನ್ಯಾಯಾಲಯ ಸಿಬಿಐ ತನಿಖೆಗೆ ಆದೇಶಿಸಿದೆ. ಎಲ್ಲಾ ದಾಖಲೆಗಳನ್ನು ತಕ್ಷಣವೇ ಸಿಬಿಐಗೆ ನೀಡುವಂತೆ ನ್ಯಾಯಾಲಯ ಪೊಲೀಸರಿಗೆ ಸೂಚಿಸಿದೆ. ಮುಖ್ಯ ನ್ಯಾಯಮೂರ್ತಿಗಳಾದ ಟಿ.ಎಸ್.ಶಿವಜ್ಞಾನಂ ಮತ್ತು ನ್ಯಾಯಮೂರ್ತಿ ಹಿರಣ್‌ಮಯ್ ಭಟ್ಟಾಚಾರ್ಯ ಅವರನ್ನು ಒಳಗೊಂಡ ವಿಭಾಗೀಯ ಪೀಠ ಈ ಆದೇಶ ಹೊರಡಿಸಿದೆ. ಸಂತ್ರಸ್ತೆಯ ಪೋಷಕರು ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ನ್ಯಾಯಾಲಯ ನಡೆಸುತ್ತಿದೆ. ಇದೇ ವೇಳೆ ಸರ್ಕಾರಿ ವೈದ್ಯಕೀಯ ಕಾಲೇಜಿನ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಅವರನ್ನೂ ಅನಿರ್ದಿಷ್ಟಾವಧಿ ರಜೆಗೆ ತೆರಳುವಂತೆ ನ್ಯಾಯಾಲಯ ಸೂಚಿಸಿದೆ. ಆರ್.ಜಿ.ಕರ್ ವೈದ್ಯಕೀಯ ಕಾಲೇಜಿಗೆ ರಾಜೀನಾಮೆ ನೀಡಿದ ನಂತರ ಕೋಲ್ಕತ್ತಾದ ರಾಷ್ಟ್ರೀಯ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾಗಿ ಸಂದೀಪ್ ಘೋಷ್ ಅವರನ್ನು ನಿನ್ನೆ ರಾಜ್ಯ ಸರ್ಕಾರ ಮರುನೇಮಕಗೊಳಿಸಿತ್ತು. ಇದಕ್ಕೂ ಮುನ್ನ, ತನಿಖೆಯ ಸ್ಥಿತಿಗತಿ ಬಗ್ಗೆ ವರದಿ ಸಲ್ಲಿಸುವಂತೆ ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಸೂಚಿಸಿತ್ತು. ಮಾಜಿ ಪ್ರಾಂಶುಪಾಲರ ಹೇಳಿಕೆಯನ್ನು ದಾಖಲಿಸುವಲ್ಲಿ ವಿಳಂಬ ಕುರಿತು ಪ್ರಶ್ನಿಸಿರುವ ನ್ಯಾಯಾಲಯ, ಪ್ರತಿಭಟನಾನಿರತ ವೈದ್ಯರ ಅನುಪಸ್ಥಿತಿಯಲ್ಲಿ ರೋಗಿಗಳ ಸೇವೆಗಾಗಿ ರಾಜ್ಯ ಸರ್ಕಾರ ಏನು ಕ್ರಮ ಕೈಗೊಂಡಿದೆ ಎಂದು ಕೇಳಿದೆ. ಇನ್ನೊಂದೆಡೆ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾನಿರ್ದೇಶಕರಿಗೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗವು ನೋಟಿಸ್ ಜಾರಿ ಮಾಡಿದೆ. ಅಲ್ಲದೇ ಮುಂದಿನ ಎರಡು ವಾರಗಳಲ್ಲಿ ಪ್ರಕರಣದ ಕುರಿತು ವರದಿ ಸಲ್ಲಿಸುವಂತೆ ಸೂಚಿಸಿದೆ. ತನಿಖೆಯ ಪ್ರಸ್ತುತ ಸ್ಥಿತಿ ಮತ್ತು ಆರೋಪಿಗಳ ವಿರುದ್ಧ ಕ್ರಮಗಳನ್ನು ಕೈಗೊಂಡಿರುವ ಕುರಿತು ವರದಿ ನೀಡುವಂತೆ ನಿರ್ದೇಶಿಸಲಾಗಿದೆ. ಇದೇ ವೇಳೆ, ಕೇಂದ್ರ ಆರೋಗ್ಯ ಸಚಿವಾಲಯದ ಅಧಿಕಾರಿಗಳೊಂದಿಗೆ ನಡೆಸಿದ ಸಭೆ ಯಾವುದೇ ನಿರ್ಣಯಕ್ಕೆ ಬರಲು ವಿಫಲವಾದ ಹಿನ್ನೆಲೆಯಲ್ಲಿ ವೈದ್ಯರ ಸಂಘಗಳ ಒಕ್ಕೂಟ ತನ್ನ ಅನಿರ್ದಿಷ್ಟಾವಧಿ ಮುಷ್ಕರವನ್ನು ವಿಸ್ತರಿಸುವುದಾಗಿ ಘೋಷಿಸಿದೆ.

**<><*<><>*><>**

ವಕ್ಫ್ ತಿದ್ದುಪಡಿ ವಿಧೇಯಕ-೨೦೨೪ ರ ಜಂಟಿ ಸಮಿತಿಯ ಅಧ್ಯಕ್ಷರನ್ನಾಗಿ ಬಿಜೆಪಿ ಸಂಸದ ಜಗದಾಂಬಿಕಾ ಪಾಲ್ ಅವರನ್ನು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ನೇಮಿಸಿದ್ದಾರೆ.

ವಿಧೇಯಕದ ಕುರಿತು ಹೆಚ್ಚಿನ ಪರಿಶೀಲನೆಗಾಗಿ ಮೂವತ್ತೊಂದು ಸದಸ್ಯರ ಸಮಿತಿಯನ್ನು ರಚಿಸಲಾಗಿದೆ. ಇತ್ತೀಚೆಗೆ ಮುಕ್ತಾಯಗೊಂಡ ಸಂಸತ್ತಿನ ಬಜೆಟ್ ಅಧಿವೇಶನದಲ್ಲಿ ವಿಧೇಯಕವನ್ನು ಲೋಕಸಭೆಯಲ್ಲಿ ಮಂಡಿಸಲಾಯಿತು ಮತ್ತು ಅದನ್ನು ಜಂಟಿ ಸಂಸದೀಯ ಸಮಿತಿಗೆ ಕಳುಹಿಸಲಾಯಿತು. ಸಂಸತ್ತಿನ ಚಳಿಗಾಲದ ಅಧಿವೇಶನದ ಮುನ್ನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲಿದೆ.

**<><*<><>*><>**

ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ನಾವೀನ್ಯತೆ, ವೈಜ್ಞಾನಿಕ ಚಿಂತನೆಯ ಜೊತೆಗೆ ತ್ವರಿತ ಪರಿಹಾರಗಳನ್ನು ಕಂಡುಕೊಳ್ಳಬೇಕು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಕರೆ ನೀಡಿದ್ದಾರೆ. ಭೋಪಾಲ್‌ನಲ್ಲಿಂದು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಎಜುಕೇಶನ್ ಅಂಡ್ ರಿಸರ್ಚ್- ಐಐಎಸ್‌ಇಆರ್‌ನಲ್ಲಿ ಆಯೋಜಿಸಲಾದ ಹನ್ನೊಂದನೇ ಘಟಿಕೋತ್ಸವ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ವಿಜ್ಞಾನ ಶಿಕ್ಷಣ ಮತ್ತು ಸಂಶೋಧನೆಯನ್ನು ಸಮಾಜದ ಒಳಿತಿಗಾಗಿ ಬಳಸಿಕೊಳ್ಳಬೇಕು ಎಂದು ಹೇಳಿದರು. ನವೀಕರಿಸಬಹುದಾದ ಇಂಧನ ಈ ಸಮಯದ ಅಗತ್ಯ ಎಂದು ವಿವರಿಸಿದ ಅವರು, ಸುಧಾರಿತ ರಸಾಯನಶಾಸ್ತ್ರದ ಮೂಲಕ ದೇಶದ ಇಂಧನ ಅಗತ್ಯಗಳನ್ನು ಪೂರೈಸಲು ಪ್ರಯತ್ನಿಸುವಂತೆ ವಿದ್ಯಾರ್ಥಿಗಳಿಗೆ ಮನವಿ ಮಾಡಿದರು. ಎಐ ಆಧಾರಿತ ತಂತ್ರಜ್ಞಾನ, ನೈಸರ್ಗಿಕ ಹಸಿರು ಜಲಜನಕ ಯೋಜನೆ, ಸಂಶೋಧನೆಗೆ ಅನುದಾನ ಹೆಚ್ಚಳ ಮತ್ತು ೫ ಜಿ ತಂತ್ರಜ್ಞಾನ ಸೇರಿದಂತೆ ಸರ್ಕಾರದ ವಿವಿಧ ಪ್ರಯತ್ನಗಳನ್ನು ಉಲ್ಲೇಖಿಸಿದ ಅವರು, ಸಂಘಟಿತ ಪ್ರಯತ್ನಗಳಿಂದ ಮಾತ್ರ ದೇಶವನ್ನು ಅಭಿವೃದ್ಧಿಪಡಿಸಲು ಸಾಧ್ಯ ಎಂದು ಹೇಳಿದರು. ಬಳಿಕ ನಿರ್ಮಲಾ ಸೀತಾರಾಮನ್ ಅವರು, ಭೋಪಾಲ್‌ನ ಐಐಎಸ್‌ಇಆರ್ ನ ನೂತನ ಶೈಕ್ಷಣಿಕ ಕಟ್ಟಡ ಮತ್ತು ಉಪನ್ಯಾಸ ಸಭಾಂಗಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು.

**<><*<><>*><>**

ಭಾರತೀಯ ರೈಲ್ವೆ ಕೇಟರಿಂಗ್ ಮತ್ತು ಟೂರಿಸಂ ಕಾರ್ಪೊರೇಶನ್- ಐಆರ್‌ಸಿಟಿಸಿ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶ ಸಾರಿಗೆ ಸಂಸ್ಥೆಯು- ಎನ್‌ಸಿಆರ್‌ಟಿಸಿ ಭಾರತೀಯ ರೈಲ್ವೇ ಮತ್ತು ನಮೋ ಭಾರತ್ ರೈಲುಗಳಲ್ಲಿ ಪ್ರಯಾಣಿಕರಿಗೆ ಉತ್ತಮ ಅನುಭವ ಒದಗಿಸುವ ನಿಟ್ಟಿನಲ್ಲಿ ಹೊಸ ಯೋಜನೆ ಆರಂಭಿಸಲು ಮುಂದಾಗಿದೆ. 'ಒಂದು ಭಾರತ-ಒಂದು ಟಿಕೆಟ್' ಎಂಬ ಯೋಜನೆಯನ್ನು ಪ್ರಾರಂಭಿಸಲು ಇದು ಸಹಕಾರಿಯಾಗಿದೆ. ಇದು ಪ್ರಯಾಣಿಕರಿಗೆ ನಮೋ ಭಾರತ್ ಟಿಕೆಟ್‌ಗಳನ್ನು ಐಆರ್‌ಸಿಟಿಸಿ ಪ್ಲಾಟ್‌ಫಾರ್ಮ್ ಮೂಲಕ ಟಿಕೆಟ್ ಬುಕ್ ಮಾಡಲು ಅವಕಾಶ ಕಲ್ಪಿಸುತ್ತದೆ. ನಮೋ ಭಾರತ್ ರೈಲು ಟಿಕೆಟ್‌ಗಾಗಿ ಪ್ರಯಾಣಿಕರು ವಿಶಿಷ್ಟ ಕ್ಯೂಆರ್ ಕೋಡ್ ಅನ್ನು ರಚಿಸಬಹುದು ಎಂದು ಐಆರ್‌ಸಿಟಿಸಿ ತಿಳಿಸಿದೆ. ಪ್ರಯಾಣದ ದಿನಾಂಕದ ೪ ದಿನಗಳವರೆಗೆ ಕೋಡ್ ಮಾನ್ಯವಾಗಿರುತ್ತದೆ. ನಮೋ

ಭಾರತ್ ಟಿಕೆಟ್‌ಗಳನ್ನು ಪ್ರಸ್ತುತ ರೈಲ್ವೇ ಕಾಯ್ದಿರಿಸುವಿಕೆ ವಿಂಡೋದೊಂದಿಗೆ ೧೨೦ ದಿನಗಳ ಮುಂಚಿತವಾಗಿ ಬುಕ್ ಮಾಡಬಹುದಾಗಿದೆ. ಈ ಯೋಜನೆಯಿಂದ ರೈಲ್ವೆ ಪ್ರಯಾಣಿಕರಿಗೆ ಸಾಕಷ್ಟು ಅನುಕೂಲವಾಗಲಿದೆ ಮತ್ತು ಹೊಸ ಅನುಭವ ನೀಡಲಿದೆ ಎಂದು ಐಆರ್‌ಸಿಟಿಸಿ ಮಾಹಿತಿ ನೀಡಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವು ಇಂಧನ ಸ್ವಾವಲಂಬನೆಯತ್ತ ಸಾಗುತ್ತಿದೆ ಎಂದು ಪೆಟ್ರೋಲಿಯಂ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ೨೦೫೦ರ ವೇಳೆಗೆ ದೇಶದ ಇಂಧನ ಬೇಡಿಕೆಯು ದ್ವಿಗುಣಗೊಳ್ಳುವ ನಿರೀಕ್ಷೆ ಇದೆ. ನಮ್ಮ ಅಸ್ತಿತ್ವದಲ್ಲಿರುವ ಇಂಧನ ಮೂಲಸೌಕರ್ಯಗಳ ವಿಸ್ತರಣೆಯ ಮೇಲೆ ನಾವು ಗಮನಹರಿಸುತ್ತೇವೆ. ನಮ್ಮ ದೇಶ ವಿಶ್ವದ ನಾಲ್ಕನೇ ಅತಿದೊಡ್ಡ ಸಂಸ್ಕರಣಾಗಾರವಾಗಿದೆ ಎಂದು ಸಚಿವರು ಹೇಳಿದರು. ಈ ಉದ್ದೇಶಕ್ಕಾಗಿ, ಸಚಿವಾಲಯವು ಉತ್ಪತ್ತಿಯಾಗುವ ಅನಿಲದ ಹಂಚಿಕೆ ಅಥವಾ ಒಎನ್‌ಜಿಸಿ ಮತ್ತು ಆಯಿಲ್ ಇಂಡಿಯಾ ಲಿಮಿಟೆಡ್‌ನ ನಾಮನಿರ್ದೇಶಿತ ಕ್ಷೇತ್ರಗಳಿಂದ ೨೦ ಪ್ರತಿಶತ ಪ್ರೀಮಿಯಂನಲ್ಲಿ ಮಧ್ಯಸ್ಥಿಕೆಗಳನ್ನು ಸಹ ಸೂಚಿಸಿದೆ. ಪೆಟ್ರೋಲಿಯಂ ಯೋಜನೆ ಮತ್ತು ವಿಶ್ಲೇಷಣಾ ಕೋಶದ ಮಾಸಿಕ ಆಧಾರದ ಮೇಲೆ ಘೋಷಿಸಿದಂತೆ ಆಡಳಿತಾತ್ಮಕ ಬೆಲೆ ಕಾರ್ಯವಿಧಾನ ಪ್ರಕಾರ ಬೆಲೆಯನ್ನು ಶೇಕಡಾ ೧೦ಕ್ಕೆ ನಿಗದಿಪಡಿಸಲಾಗಿದೆ. ಕಂಪನಿಗಳಿಗೆ ಹೆಚ್ಚಿನ ಅಪಾಯ ಮತ್ತು ಸವಾಲಿನ ಸಂದರ್ಭಗಳಲ್ಲಿ ನೈಸರ್ಗಿಕ ಅನಿಲದ ಉತ್ಪಾದನೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಅಭಿವೃದ್ಧಿಗೆ ಹೆಚ್ಚಿನ ಬಂಡವಾಳ ಮತ್ತು ತಂತ್ರಜ್ಞಾನದ ಅಗತ್ಯವಿದೆ ಎಂದು ಸಚಿವರು ಹೇಳಿದ್ದಾರೆ.

**<><*<><>*><>**

ಕಳೆದ ಡಿಸೆಂಬರ್‌ನಿಂದ ಚಿಲ್ಲರೆ ಹಣದುಬ್ಬರವು ಸತತ ಇಳಿಕೆಯಾಗುತ್ತಿದ್ದು, ಜುಲೈನಲ್ಲಿ ಚಿಲ್ಲರೆ ಹಣದುಬ್ಬರವು ಶೇಕಡ ೩.೫೪ ಕ್ಕೆ ತಗ್ಗಿದೆ. ಇದು ೫ ವರ್ಷಗಳಲ್ಲಿ ಮೊದಲ ಬಾರಿಗೆ ರಿಸರ್ವ್ ಬ್ಯಾಂಕ್ ನಿಗದಿಪಡಿಸಿದ ಶೇಕಡಾ ೪ ಕ್ಕಿಂತ ಕಡಿಮೆಯಾಗಿದೆ. ಕೆಲವು ಆಹಾರ ವಸ್ತುಗಳ ಬೆಲೆಗಳು ಸ್ವಲ್ಪಮಟ್ಟಿಗೆ ಕಡಿಮೆಯಾಗಿರುವುದರಿಂದ ಚಿಲ್ಲರೆ ಹಣದುಬ್ಬರ ಇಳಿಕೆಯಾಗಿದೆ ಎಂದು ಕೇಂದ್ರ ಸರ್ಕಾರದ ಅಂಕಿ-ಅಂಶಗಳು ತಿಳಿಸಿವೆ. ಗ್ರಾಹಕ ಬೆಲೆ ಸೂಚ್ಯಂಕ ಆಧಾರಿತ ಚಿಲ್ಲರೆ ಹಣದುಬ್ಬರವು ಜೂನ್ ೨೦೨೪ ರಲ್ಲಿ ಶೇಕಡ ೫.೦೮ ರಷ್ಟು ಇತ್ತು. ಅದು ಜುಲೈನಲ್ಲಿ ಶೇಕಡ ೩.೫೪ಕ್ಕೆ ಇಳಿದಿದೆ. ಜುಲೈ ೨೦೨೩ ರಲ್ಲಿ ಶೇಕಡಾ ೭.೪೪ ರಷ್ಟಿತ್ತು. ರಾಷ್ಟ್ರೀಯ ಅಂಕಿಅಂಶ ಕಚೇರಿ ಬಿಡುಗಡೆ ಮಾಡಿದ ಅಂಕಿ-ಅಂಶಗಳ ಪ್ರಕಾರ ಆಹಾರದ ಹಣದುಬ್ಬರವು ಜುಲೈನಲ್ಲಿ ಶೇಕಡ ೫.೪೨ಕ್ಕೆ ಇಳಿದಿದೆ. ಆಹಾರ ಹಣದುಬ್ಬರವು ಜೂನ್‌ನಲ್ಲಿ ಶೇಕಡ ೯.೩೬ ರಷ್ಟು ಇತ್ತು. ಜುಲೈನಿಂದ ಸೆಪ್ಟಂಬರ್‌ವರೆಗಿನ ತ್ರೈಮಾಸಿಕದಲ್ಲಿ ಹಣದುಬ್ಬರ ಶೇಕಡ ೪.೪ರಷ್ಟಿರಬಹುದು ಎಂದು

ಆರ್‌ಬಿಐ ಅಂದಾಜು ಮಾಡಿತ್ತು. ಆದರೆ, ವಾಸ್ತವದಲ್ಲಿ ಹಣದುಬ್ಬರ ಈ ಅವಧಿಯಲ್ಲಿ ಇನ್ನೂ ಕಡಿಮೆಯಾಗುವ ಸಾಧ್ಯತೆ ಹೆಚ್ಚಾಗಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೬೯೩ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೮ ಸಾವಿರದ ೯೫೬ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೨೦೮ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೧೩೯ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ಮೌಲ್ಯ ೮೩ ರೂಪಾಯಿ ೯೭ ಪೈಸೆಯಷ್ಟಾಗಿದೆ.

<><*<><>*><>

ಮುಂದಿನ ಎರಡು ದಿನಗಳಲ್ಲಿ ತಮಿಳುನಾಡು, ಪುದುಚೆರಿ, ಕಾರೈಕಲ್, ಕೇರಳ, ಮಾಹೆ, ಅರುಣಾಚಲ ಪ್ರದೇಶ, ಉತ್ತರಾಖಂಡ್ ಮತ್ತು ರಾಜಸ್ಥಾನದ ಹಲವೆಡೆ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ವೇಳೆ ಪಶ್ಚಿಮ ಹಿಮಾಚಲ ಪ್ರದೇಶ, ಪೂರ್ವ ಮತ್ತು ಈಶಾನ್ಯ ಭಾರತದ ಕೆಲವು ಪ್ರದೇಶಗಳಲ್ಲಿ ಮುಂದಿನ ಒಂದು ವಾರಗಳ ಕಾಲ ಸಾಧಾರಣ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದ ಭಾರತ ಹಾಕಿ ತಂಡಕ್ಕೆ ದೆಹಲಿ ವಿಮಾನ ನಿಲ್ದಾಣದಲ್ಲಿಂದು ಅಭೂತಪೂರ್ವ ಸ್ವಾಗತ ದೊರೆಯಿತು. ಪದಕ ವಿಜೇತ ತಂಡದ ಸದಸ್ಯರನ್ನು ಬರಮಾಡಿಕೊಳ್ಳಲು ವಿಮಾನ ನಿಲ್ದಾಣದಲ್ಲಿ ಅಪಾರ ಸಂಖ್ಯೆಯಲ್ಲಿ ಅಭಿಮಾನಿಗಳು ನೆರೆದಿದ್ದರು. ದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೇಂದ್ರ ಯುವಜನ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ ಆಟಗಾರರನ್ನು ಸನ್ಮಾನಿಸಿದರು.

<><*<><>*><>

ರಾಷ್ಟ್ರೀಯ ಅಂತರಿಕ್ಷಾ ದಿನಾಚರಣೆಯನ್ನು ಇದೇ ಆಗಸ್ಟ್ ೨೩ ರಂದು ದೇಶಾದ್ಯಂತ ಆಚರಿಸಲಾಗುತ್ತಿದ್ದು, ಅಂದಿನ ದಿನವನ್ನು ನಾವು ಬಾಹ್ಯಕಾಶ ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಧಿಸಬೇಕಾದ ಪ್ರಗತಿಯ ಚಿಂತನೆಯಲ್ಲಿ ವಿನಿಯೋಗಸಬೇಕು ಎಂದು ಯು.ಆರ್. ರಾವ್ ಉಪಗ್ರಹ ಕೇಂದ್ರದ ನಿರ್ದೇಶಕ ಎಂ. ಶಂಕರಂ ಹೇಳಿದ್ದಾರೆ. ಬೆಂಗಳೂರಿನ ಭಾರತೀಯ

ವಿಜ್ಞಾನ ಸಂಸ್ಥೆ-ಐಐಎಸ್‌ಸಿ ಯಲ್ಲಿ ಇಂದು ಏರ್ಪಡಿಸಿದ್ದ ಬಾಹ್ಯಕಾಶ ದಿನಾಚರಣೆಯ ಸ್ಮರಣಾರ್ಥ ಕಾರ್ಯಗಾರದಲ್ಲಿ ಅವರು, ಮಾತನಾಡಿದರು.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ **<>*><>**